DBCDC

# ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.

(ಕರ್ನಾಟಕ ಸರ್ಕಾರದ ಉದ್ಯಮ)

ನಂ.16-ಡಿ, 4ನೇ ಮಹಡಿ, ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-52

Ph : 080-22374832, 22374834 Fax : 080-22374833, E-mail: md.dbcdc@gmail.com, visit at : www.karnataka.gov.in/dbcdc

ದೇಹಿನಿ/ಅರಿವು/ಸಿಇಟಿ/ಪಿಜಿ/ಪಿಓ-1/ಸಿಆರ್-01ಬಿ/2018-19 ದಿನಾಂಕ:09.07.2018

## ಪ್ರಕಟಣೆ

I ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ ಪ್ರವೇಶಾತಿ ಪಡೆಯುವ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ವಾರ್ಷಿಕವಾಗಿ ಗರಿಷ್ಠ ರೂ.1.00 ಲಕ್ಷಗಳವರೆಗೆ ಸಾಲ ಮಂಜೂರು ಮಾಡಲಾಗುತ್ತದೆ.

2018-19ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಡಿಪ್ಲೋಮೊ ಲ್ಯಾಟರಲ್ ಎಂಟ್ರಿ(ಇಂಜಿನಿಯರಿಂಗ್ ಕೋರ್ಸ್‌ಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಮಾತ್ರ) ಪಿ.ಜಿ ಕೋರ್ಸ್‌ಗಳಾದ, ಎಂ.ಬಿ.ಎ., ಎಂ.ಸಿ.ಎ., ಎಂ.ಟೆಕ್., ಎಂ.ಇ., ಕೋರ್ಸ್‌ಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ ಆಯ್ಕೆಯಾಗಿ ಸಾಲ ಪಡೆಯ ಬಯಸುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸಿ.ಇ.ಟಿ.ಗೆ ಪಾವತಿಸಬೇಕಾದ ಶುಲ್ಕವನ್ನು ಸಿ.ಇ.ಟಿ ಯಿಂದ ಸೀಟು ಪಡೆಯುವ ಹಂತದಲ್ಲಿಯೇ ನಿಗಮದಿಂದ ಸಾಲ ಮಂಜೂರು ಮಾಡಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಶುಲ್ಕ ಹೊಂದಾಣಿಕೆ ಮಾಡಲಾಗುತ್ತದೆ.

2018-19ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ/ಸಿ.ಇ.ಟಿ ಮೂಲಕ ಸೀಟು ಪಡೆದು ಡಿಪ್ಲೋಮೊ ಲ್ಯಾಟರಲ್ ಎಂಟ್ರಿ(ಇಂಜಿನಿಯರಿಂಗ್ ಕೋರ್ಸ್‌ಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಮಾತ್ರ) ಪಿ.ಜಿ ಕೋರ್ಸ್‌ಗಳಾದ, ಎಂ.ಬಿ.ಎ., ಎಂ.ಸಿ.ಎ., ಎಂ.ಟೆಕ್., ಎಂ.ಇ., ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಲು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಸಾಲ ಪಡೆಯಬಯಸುವ ಹಿಂದುಳಿದ ವರ್ಗಗಳ ಪ್ರ-1, ಪ್ರ-2ಎ, ಪ್ರ-3ಎ ಮತ್ತು ಪ್ರ-3ಬಿ ಗೆ ಸೇರಿದ್ದು, (ವಿಶ್ವಕರ್ಮ ಮತ್ತು ಉಪ ಜಾತಿಗಳು, ಅಲ್ಪ ಸಂಖ್ಯಾತರು ಮತ್ತು ಅದರ ಉಪಜಾತಿಗಳನ್ನು ಹೊರತುಪಡಿಸಿ) ವಿದ್ಯಾರ್ಥಿ ಮತ್ತು ಕುಟುಂಬದ ವಾರ್ಷಿಕ ವರಮಾನ ರೂ.3.50 ಲಕ್ಷಗಳ ಮಿತಿಯಲ್ಲಿ ಇರುವ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ. ಸ್ವೀಕೃತಗೊಂಡ ಅರ್ಜಿಗಳಲ್ಲಿ ಅನುದಾನ ಲಭ್ಯತೆ, ಸರ್ಕಾರದ ಆದೇಶದನ್ವಯ ಪ್ರವರ್ಗವಾರು 70:30ರ ಅನುಪಾತ ಹಾಗೂ ರ್‍ಯಾಂಕ್‌ವಾರು ಪರಿಗಣಿಸಿ ಆಯ್ಕೆ ಮಾಡಲಾಗುವುದು.

ಸಾಲ ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವೆಬ್‌ಸೈಟ್ www.karnataka.gov.in/dbcdc ರಲ್ಲಿ ಲಾಗಿನ್ ಆಗಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ Username infra\dbcdcarivu ಮತ್ತು Passward DB(d#098 ನ್ನು ನಮೂದಿಸಿ ಅರ್ಜಿಯನ್ನು ಆನ್‌ಲೈನ್‌ಲ್ಲಿ ಭರ್ತಿಮಾಡುವುದು. ಈ ಕೆಳಕಂಡ ದಾಖಲೆಗಳನ್ನು Scan ಮಾಡಿ ಅರ್ಜಿಯೊಂದಿಗೆ ಆನ್‌ಲೈನ್‌ಲ್ಲಿ ದಿನಾಂಕ 31.07.2018 ರೊಳಗೆ ಸಲ್ಲಿಸುವುದು. ವಿದ್ಯಾರ್ಥಿಯು ಒಂದಕ್ಕಿಂತ ಹೆಚ್ಚಿನ ಜಿಲ್ಲೆಯಲ್ಲಿ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ತಿರಸ್ಕರಿಸಲಾಗುವುದು..

**ಅರ್ಜಿಯೊಂದಿಗೆ Scan ಮಾಡಿ ಸಲ್ಲಿಸಬೇಕಾದ ದಾಖಲೆಗಳು:-**

1. ಜಾತಿ ಮತ್ತು ಆದಾಯ ಪ್ರಮಾಣ ಪತ್ರ
2. ವಿದ್ಯಾರ್ಥಿ ಮತ್ತು ಪೋಷಕರ ಭಾವಚಿತ್ರ.
3. ಆಧಾರ್ ಕಾರ್ಡ್/ಚುನಾವಣಾ ಗುರುತಿನ ಚೀಟಿ.
4. ಎಸ್.ಎಸ್.ಎಲ್.ಸಿ ಅಂಕಪಟ್ಟಿ.
5. ಸಿ.ಇ.ಟಿ ಪ್ರವೇಶ ಪರೀಕ್ಷೆ ಅಡ್ಮಿಷನ್ ಟಿಕೆಟ್.

II ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಸಿ.ಇ.ಟಿ ಮೂಲಕ ಪ್ರವೇಶಾತಿ ಪಡೆಯುವ ವೃತ್ತಿಪರ ಕೋರ್ಸ್‌ಗಳನ್ನು ಹೊರತುಪಡಿಸಿದ ಕೋರ್ಸ್‌ಗಳಾದ ಪಿ.ಹೆಚ್.ಡಿ., ಬಿಸಿಎ/ಎಂ.ಸಿ.ಎ., ಎಂ.ಎಸ್.ಆಗ್ರಿಕಲ್ಚರ್., ಬಿ.ಎಸ್ಸಿ ನರ್ಸಿಂಗ್., ಬಿ.ಎಸ್ಸಿ ಪ್ಯಾರಾ ಮೆಡಿಕಲ್., ಬಿ.ಎಸ್ಸಿ. ಬಯೋ ಟೆಕ್ನಾಲಜಿ., ಬಿಟೆಕ್., ಬಿ.ಪಿ.ಟಿ., ಜಿ.ಎನ್.ಎಂ., ಬಿ.ಹೆಚ್.ಎಮ್., ಎಂ.ಡಿ.ಎಸ್., ಎಂ.ಎಸ್.ಡಬ್ಲ್ಯೂ., ಎಲ್.ಎಲ್.ಎಂ., ಎಂ.ಎಫ್.ಎ., ಎಂ.ಎಸ್ಸಿ ಬಯೋಟೆಕ್ನಾಲಜಿ., ಎಂ.ಎಸ್ಸಿ ಎಜಿ., ಈ ಕೋರ್ಸ್‌ಗಳಿಗೆ 2018-19ನೇ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಸರ್ಕಾರಿ/ಅನುದಾನಿತ ಕಾಲೇಜುಗಳಿಗೆ ನೇರ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಿಂದ ದಿನಾಂಕ 25.07.2018ರೊಳಗೆ ಅರ್ಜಿಯನ್ನು ಪಡೆದು ಭರ್ತಿ ಮಾಡಿದ ಅರ್ಜಿಯನ್ನು ದಿನಾಂಕ 04.08.2018ರೊಳಗಾಗಿ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರಿಗೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗೆ ಆಯಾ ಜಿಲ್ಲೆಯಲ್ಲಿನ ನಿಗಮದ ಜಿಲ್ಲಾ ಕಛೇರಿಗಳನ್ನು ಅಥವಾ ನಿಗಮದ ಕೇಂದ್ರ ಕಛೇರಿಯನ್ನು ಸಂಪರ್ಕಿಸಬಹುದು.

(ಡಾ|| ಎಂ.ಆರ್. ಏಕಾಂತಪ್ಪ)

ವ್ಯವಸ್ಥಾಪಕ ನಿರ್ದೇಶಕರು